# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ: ತುವಿ:ಅವಿ:2025-26/2691 ದಿನಾಂಕ:03.12.2025

"ಸುತ್ತೋಲೆ"

**ವಿಷಯ: ಕರ್ನಾಟಕ ಸಾಹಿತ್ಯ ಅಕಾಡೆಮಿಯ 2024ನೇ ಸಾಲಿನ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಭಾಗವಹಿಸುವ ಕುರಿತು.**

**ಉಲ್ಲೇಖ:ಅಧ್ಯಕ್ಷರು, ಕರ್ನಾಟಕ ಸಾಹಿತ್ಯ ಅಕಾಡೆಮಿ, ಬೆಂಗಳೂರು ಇವರ ಪತ್ರ ದಿನಾಂಕ:01.12.2025**

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಸಾಹಿತ್ಯ ಅಕಾಡೆಮಿಯು 2024ನೇ ಸಾಲಿನ ಗೌರವ ಸಾಹಿತ್ಯಶ್ರೀ ಪ್ರಶಸ್ತಿಗಳನ್ನು ಹಾಗೂ 2023ನೇ ಸಾಲಿನ ಪುಸ್ತಕ ಬಹುಮಾನ ಪ್ರಧಾನ ಮಾಡುವ ಸಮಾರಂಭವನ್ನು **ದಿನಾಂಕ:05.12.2025 ರಂದು ತುಮಕೂರು ಜಿಲ್ಲೆಯ ಗುಬ್ಬಿ ಪಟ್ಟಣದಲ್ಲಿರುವ ಡಾ. ಗುಬ್ಬಿ, ವೀರಣ್ಣ ರಂಗಮಂದಿರದಲ್ಲಿ** ಆಯೋಜಿಸಲಾಗಿದ್ದು, ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರು, ಸಂಶೋಧನಾರ್ಥಿಗಳು ಹಾಗೂ ಸಾಹಿತ್ಯಾಸಕ್ತ ವಿದ್ಯಾರ್ಥಿಗಳಿಗೆ ಸದರಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ತಿಳಿಸಿರುತ್ತಾರೆ.

ಈ ಸಂಬಂಧ ಮೇಲ್ಕಂಡ ಉಲ್ಲೇಖ(01)ರ ಪತ್ರ ಮತ್ತು ಕೈಪಿಡಿಯನ್ನು ಈ ಪತ್ರದೊಂದಿಗೆ ಲಗತ್ತಿಸಿದ್ದು, ಕರ್ನಾಟಕ ಸಾಹಿತ್ಯ ಅಕಾಡೆಮಿಯು ಆಯೋಜಿಸಿರುವ 2024ನೇ ಸಾಲಿನ ಗೌರವ ಸಾಹಿತ್ಯಶ್ರೀ ಪ್ರಶಸ್ತಿ ಹಾಗೂ 2023ನೇ ಸಾಲಿನ ಪುಸ್ತಕ ಬಹುಮಾನ ಪ್ರಧಾನ ಸಮಾರಂಭದಲ್ಲಿ ಆಸಕ್ತರು ಭಾಗವಹಿಸುವ ಸಂಬಂಧ ತಮ್ಮ ವಿಭಾಗಗಳ/ಕಾಲೇಜುಗಳ ಪ್ರಾಧ್ಯಾಪಕರು, ಸಂಶೋಧನಾರ್ಥಿಗಳು ಹಾಗೂ ಸಾಹಿತ್ಯಾಸಕ್ತ ವಿದ್ಯಾರ್ಥಿಗಳ ಗಮನಕ್ಕೆ ತರುವಂತೆ ಈ ಮೂಲಕ ತಿಳಿಸಲಾಗಿದೆ.

ಉಪಕುಲಸಚಿವರು
ಅಭಿವೃದ್ಧಿ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

1. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ತುವಿತು.
2. ಅಧ್ಯಕ್ಷರು/ಸಂಯೋಜಕರು ಸ್ನಾತಕೋತ್ತರ ವಿಜ್ಞಾನ ವಿಭಾಗಗಳು,"ಜ್ಞಾನಸಿರಿ ಕ್ಯಾಂಪಸ್" ಬಿದರಕಟ್ಟೆ, ಹೆಬ್ಬೂರು ಹೋಬಳಿ, ತುವಿತು.
3. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ, ಕಾಲೇಜುಗಳು, ತುವಿತು.

ಪ್ರತಿಗಳು:

1. ಸಿಸ್ಟಮ್ ಅನಾಲಿಸ್ಟ್, ಗಣಕಯಂತ್ರ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-ಈ ಸುತ್ತೋಲೆಯನ್ನು ಸಂಬಂಧಿಸಿದವರಿಗೆ ಇ-ಮೇಲ್ ಮೂಲಕ ಕಳುಹಿಸಲು ಸೂಕ್ತ ಕ್ರಮವಹಿಸುವುದು.
2. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುವಿತು.
3. ಕಚೇರಿ ಪ್ರತಿ.

ಕರ್ನಾಟಕ ಸಾಹಿತ್ಯ ಅಕಾಡೆಮಿ

ಕರ್ನಾಟಕ ಸರ್ಕಾರ

# ಕರ್ನಾಟಕ ಸಾಹಿತ್ಯ ಅಕಾಡೆಮಿ
# Karnataka Sahithya Academy

ಕನ್ನಡ ಭವನ, ೨ನೇ ಮಹಡಿ, ಜೆ.ಸಿ. ರಸ್ತೆ,
ಬೆಂಗಳೂರು - ೫೬೦ ೦೦೨.
ದೂರವಾಣಿ : ೦೮೦- ೨೨೨೧ ೧೬೫೦
೨೯೬೦೧೬೫೦, ೨೨೧೦ ೬೪೬೦
ಜಾಲತಾಣ : sahithyaacademy.karnataka.gov.in
ಇ-ಅಂಚೆ: sahithya.academy@gmail.com

ಕಸಾಅ/64/2025-26 ದಿನಾಂಕ: 01-12-2025

**ಎಲ್.ಎನ್. ಮುಕುಂದರಾಜ್**
ಅಧ್ಯಕ್ಷರು

ಇವರಿಗೆ,

ಕುಲಸಚಿವರು
ಆಡಳಿತಾಂಗ
ತುಮಕೂರು ವಿಶ್ವವಿದ್ಯಾಲಯ
ತುಮಕೂರು

ಮಾನ್ಯರೇ,

ವಿಷಯ: 2024ನೇ ಸಾಲಿನ ಪ್ರಶಸ್ತಿ ಪ್ರದಾನ ಸಮಾರಂಭಕ್ಕೆ ಆಗಮಿಸುವಂತೆ ಕೋರಿ.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಸಾಹಿತ್ಯ ಅಕಾಡೆಮಿಯು 2024ನೇ ಸಾಲಿನ ಗೌರವ, ಸಾಹಿತ್ಯಶ್ರೀ ಪ್ರಶಸ್ತಿಗಳನ್ನು ಹಾಗೂ 2023ನೇ ಸಾಲಿನ ಪುಸ್ತಕ ಬಹುಮಾನ ಪ್ರದಾನ ಮಾಡುವ ಸಮಾರಂಭವನ್ನು **ದಿನಾಂಕ: 05-12-2025 ರಂದು ತುಮಕೂರು ಜಿಲ್ಲೆಯ ಗುಬ್ಬಿ ಪಟ್ಟಣದಲ್ಲಿರುವ ಡಾ. ಗುಬ್ಬಿ ವೀರಣ್ಣ ರಂಗಮಂದಿರದಲ್ಲಿ ಸಂಜೆ 05:00 ಗಂಟೆಗೆ ಆಯೋಜಿಸಲಾಗಿದೆ.**

ಕರ್ನಾಟಕ ಸಾಹಿತ್ಯ ಅಕಾಡೆಮಿಯು ತಾಲೂಕು ಮಟ್ಟದಲ್ಲಿ ನಡೆಸುತ್ತಿರುವ ಮೊಟ್ಟಮೊದಲ ಪ್ರಶಸ್ತಿ ಪ್ರದಾನ ಸಮಾರಂಭವಾಗಿದ್ದು, ಇದನ್ನು ತುಮಕೂರು ಜಿಲ್ಲೆಯ ಗುಬ್ಬಿ ತಾಲೂಕಿನಲ್ಲಿ ನಡೆಸಲು ಹರ್ಷವೆನಿಸುತ್ತದೆ. ಪ್ರಶಸ್ತಿ ವಿಜೇತ ಎಲ್ಲಾ ಸಾಹಿತಿಗಳನ್ನು ಗೌರವಿಸುವ ಈ ಮಹಾತ್ಕಾರ್ಯದಲ್ಲಿ ತಮ್ಮ ವಿಶ್ವವಿದ್ಯಾಲಯದ ಪ್ರಾಧ್ಯಾಪಕರು, ಸಂಶೋಧನಾರ್ಥಿಗಳು ಹಾಗೂ ಸಾಹಿತ್ಯಾಸಕ್ತ ವಿದ್ಯಾರ್ಥಿಗಳಿಗೆ ಸದರಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಸೂಚಿಸಬೇಕಾಗಿ ವಿನಂತಿ.

ಅದೇ ದಿನ ಮಧ್ಯಾಹ್ನ 04:00 ಗಂಟೆಗೆ ಪ್ರಶಸ್ತಿ ಪುರಸ್ಕೃತರು ಹಾಗೂ ಗಣ್ಯ ಲೇಖಕರೊಡನೆ ಏರ್ಪಡಿಸಿರುವ ಚಹಾಕೂಟಕ್ಕೆ ತಾವು ಸಹ ಆಗಮಿಸಿ ಅಕಾಡೆಮಿಯ ಆತಿಥ್ಯವನ್ನು ಸ್ವೀಕರಿಸುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿಕೊಡಬೇಕಾಗಿ ಕೋರಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

(ಎಲ್.ಎನ್. ಮುಕುಂದರಾಜ್)
ಅಧ್ಯಕ್ಷರು

ಮನೆ : ೬೪೮, ೯ನೇ ಮೈನ್, ೯ನೇ ಹಂತ, ಮಹಾತ್ಮ ಗಾಂಧಿ ಪಾರ್ಕ್ ಬಳಿ, ನಾಗರಬಾವಿ, ಬೆಂಗಳೂರು- ೫೬೦೦೭೨
ಮೊ. : ೯೯೦೨೦೧೨೮೧೨, E-mail : inmukundaraj@gmail.com